# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,
ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.

---

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 02.07.2022 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ. ಡಾ|| ಮುರಳಿಧರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀ.ಡಿ.ಎಂ.ರಮೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀ.ಮುತ್ತೇಗೌಡ.ಬಿ, ಕಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ.ಆಂಜಿನಪ್ಪ, ಕಂದಾಯ ನಿರೀಕ್ಷಕರು, ಕಂದಾಯ ಇಲಾಖೆ.
6. ಶ್ರೀ.ಮಾಲಂತೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
7. ಶ್ರೀ.ಗವಿಸಿದ್ದಯ್ಯ, ಸಹಾಯಕ ಅಭಿಯಂತರರು, ವಿದ್ಯುತ್ ಇಲಾಖೆ, ಬಿ.ಬಿ.ಎಂ.ಪಿ.
8. ಶ್ರೀ.ಮೋಹನ್.ಎಸ್.ವಿ, ಸಹಾಯಕ ಕಾರ್ಯಪಾಲಕ ನಿಯಂತ್ರಣಾ ಅಧಿಕಾರಿ, ಬಿ.ಡಬ್ಲ್ಯೂ.ಎಸ್.ಎಸ್.ಬಿ.
9. ಶ್ರೀ.ಎಂ.ಜೆ.ಪವನ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
10. ಶ್ರೀಮತಿ.ಹರ್ಷಿತ.ಆರ್, ಕಿರಿಯ ಅಭಿಯಂತರರು, ಕೆರೆಗಳ ವಿಭಾಗ.
11. ಕುಮಾರಿ.ಚರಿತಾ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
12. ಶ್ರೀ.ರಾಮಚಂದ್ರ.ಆರ್, ಸಹಾಯಕ ಸಬ್‌ಇನ್ಸ್‌ಪೆಕ್ಟರ್, ಬ್ಯಾಡರಹಳ್ಳಿ ಪೊಲೀಸ್ ಠಾಣೆ.
13. ಶ್ರೀ.ವಿ.ವೆಂಕಟೇಶನ್, ವ್ಯವಸ್ಥಾಪಕರು, ಘನ ತ್ಯಾಜ್ಯ ನಿರ್ವಹಣಾ ಘಟಕ.
14. ಶ್ರೀ.ಯೋಗೀಶ್.ಕೆ.ಆರ್, ಮಾರ್ಷಲ್.
15. ಶ್ರೀ.ಅಬ್ದುಲ್ ರಹೀಮ್, ಮಾರ್ಷಲ್.

ವಾರ್ಡ್ ಸಮಿತಿ ಸದಸ್ಯರುಗಳು.

1. ಶ್ರೀ.ಕೂರ್ಲಪ್ಪ, ತಿಗಳರಪಾಳ್ಯ, ಸದಸ್ಯರು.
2. ಶ್ರೀ.ಸತೀಶ್, ಹೊಸಹಳ್ಳಿ, ಸದಸ್ಯರು
3. ಶ್ರೀ.ಮಾಲತೇಶ್.ಹೆಚ್.ಟಿ, ದೊಡ್ಡಬಿದರಕಲ್ಲು, ಸದಸ್ಯರು.
4. ಶ್ರೀ.ನಟರಾಜ್, ವಿದ್ಯಾಮಾನ್ಯನಗರ, ಸದಸ್ಯರು.
5. ಶ್ರೀಮತಿ.ಸುಮಿತ್ರ, ಸಾಯಿಬಾಬಾ ಲೇಔಟ್, ಸದಸ್ಯರು.

ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.

6. ಶ್ರೀ.ರಮೇಶ್, ಪಶು ವೈದ್ಯರು.
7. ಸಹಾಯಕ ಅಭಿಯಂತರರು, ಯೋಜನೆ ವಿಭಾಗ.
8. ಶ್ರೀಮತಿ.ಅನುಪಮ.ಡಿ, ವೈದ್ಯಾಧಿಕಾರಿ, ಸರ್ಕಾರಿ ಆಸ್ಪತ್ರೆ, ತಿಪ್ಪೇನಹಳ್ಳಿ.
9. ವ್ಯವಸ್ಥಾಪಕರು, ಕಲ್ಯಾಣ ಇಲಾಖೆ.
10. ಪೀಣ್ಯಾ ಪೊಲೀಸ್ ಠಾಣೆ.
11. ವ್ಯವಸ್ಥಾಪಕರು, ಪೀಣ್ಯಾ ಬಸ್ ಡಿಪೋ.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯಲ್ಲಿ ಎಲ್ಲಾ ಸದಸ್ಯರುಗಳು ಹಾಗೂ ಅಧಿಕಾರಿಗಳು ಸ್ವಾಗತವನ್ನು ಕೋರಿ ಸಭೆಯ ಉದ್ದೇಶವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳು ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.

- ವಾರ್ಡ್ ವ್ಯಾಪ್ತಿಯಲ್ಲಿ ಹತ್ತು ಕೋವಿಡ್ ಪ್ರಕರಣಗಳು ಕಂಡುಬಂದಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಸಭೆಯಲ್ಲಿ ತಿಳಿಸಿದರು.
- ಬಿ.ಬಿ.ಎಂ.ಪಿ ಯಲ್ಲಿ ಕಳೆದ ಎರಡು ದಿನಗಳಿಂದ ಪೌರ ಕಾರ್ಮಿಕರು ಧರಣಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಕಾಳಿಕ ನಗರ, ಸಾಯಿಬಾಬಾ ನಗರ ಮತ್ತು ಮಾರಣ್ಣ ಲೇಔಟ್‌ಗಳಲ್ಲಿ ಬೀದಿ ನಾಯಿ ಹಾವಳಿ ಹೆಚ್ಚಾಗಿದ್ದು, ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ವಾರ್ಡ್ ಕಮಿಟಿ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಖಾನೆಗಳಿಂದ ಶಬ್ದ ಮಾಲಿನ್ಯವಾಗುತ್ತಿದ್ದು, ಸಂಜೆ.6.00 ಗಂಟೆಯ ನಂತರ ಹೆಚ್ಚು ಶಬ್ದ ಮಾಲಿನ್ಯ ಮಾಡುವ ಕಾರ್ಖಾನೆಗಳು ಸ್ಥಗಿತಗೊಳಿಸಬೇಕೆಂದು ನೋಡಲ್ ಅಧಿಕಾರಿಯವರು ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಈಗಾಗಲೇ ನೋಟೀಸ್ ನೀಡಿರುವ ಕಾರ್ಖಾನೆಗಳಿಗೆ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

**2) ವಾರ್ಡ್ ವ್ಯಾಪ್ತಿಯಲ್ಲಿನ ವಿದ್ಯುತ್ ವಿಭಾಗ (ಬಿ.ಬಿ.ಎಂ.ಪಿ) ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ಹೊಸ ಬೀದಿ ದೀಪಗಳಿಗೆ ಸಂಬಂಧಿಸಿದಂತೆ ಎಲ್ಲಾ ವಿದ್ಯುತ್ ಕಂಬ ಹಾಗೂ ಅವುಗಳಿಗೆ ಅಳವಡಿಸಿರುವ ಹೊಸ ಬೀದಿ ದೀಪಗಳ ವಿವರವಾದ ಮಾಹಿತಿಯನ್ನು ನೀಡುವಂತೆ ನೋಡಲ್ ಅಧಿಕಾರಿಗಳು ಸಹಾಯಕ ಅಭಿಯಂತರರವರಿಗೆ ಸೂಚಿಸಿದರು. ಹಾಗೂ ವಾರ್ಡ್ ಕಮಿಟಿ ಸದಸ್ಯರೊಂದಿಗೆ ಸದರಿ ಕಾಮಗಾರಿಯನ್ನು ಸ್ಥಳ ಪರಿಶೀಲನೆ ಮಾಡುವಂತೆ ಸೂಚಿಸಿದರು.

**3) ವಾರ್ಡ್ ವ್ಯಾಪ್ತಿಯಲ್ಲಿನ ಘನ ತ್ಯಾಜ್ಯ ಘಟಕ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ಘನ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ದುರ್ವಾಸನೆ ಬರುವ ಬಗ್ಗೆ ಸುತ್ತಮುತ್ತಲಿನ ಸಾರ್ವಜನಿಕರು ದೂರನ್ನು ನೀಡುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ನೋಡಲ್ ಅಧಿಕಾರಿಗಳು ಘಟಕ ವ್ಯವಸ್ಥಾಪಕರಿಗೆ ಸೂಚಿಸಿದರು.
- ಮುಂದಿನ ಸಭೆಗೆ ಘನ ತ್ಯಾಜ್ಯ ನಿರ್ವಹಣಾ ಘಟಕದ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಜರಾಗುವಂತೆ ನೋಡಲ್ ಅಧಿಕಾರಿಯವರು ಸೂಚಿಸಿದರು.

**4) ವಾರ್ಡ್ ವ್ಯಾಪ್ತಿಯಲ್ಲಿನ ಪೋಲೀಸ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ಅಂದ್ರಹಳ್ಳಿ ಸರ್ಕಲ್‌ನಲ್ಲಿ ಆಟೋಗಳಿಂದ ಟ್ರಾಫಿಕ್ ಸಮಸ್ಯೆ ಹೆಚ್ಚಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದುದರಿಂದ ಇದನ್ನು ನಿಯಂತ್ರಿಸುವಂತೆ ನೋಡಲ್ ಅಧಿಕಾರಿಗಳು ಬ್ಯಾಡರಹಳ್ಳಿ ಪೋಲೀಸ್ ಸಿಬ್ಬಂದಿಗೆ ಸೂಚಿಸಿದರು.
- ಮುಂದಿನ ಸಭೆಗೆ ಆರಕ್ಷಕ ನಿರೀಕ್ಷಕರು ಹಾಜರಾಗುವಂತೆ ನೋಡಲ್ ಅಧಿಕಾರಿಯವರು ಸೂಚಿಸಿದರು.

**5) ವಾರ್ಡ್ ವ್ಯಾಪ್ತಿಯಲ್ಲಿನ ಕೆರೆಗಳ ವಿಭಾಗದ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ಇರುವ ಅಂದ್ರಹಳ್ಳಿ ಕೆರೆಯು ಕಲುಷಿತ ನೀರಿನಿಂದ ತುಂಬಿದ್ದು, ಸದರಿ ಕೆರೆಯ ಎಸ್.ಟಿ.ಪಿ ಯನ್ನು ಸರಿಯಾಗಿ ನಿರ್ವಹಿಸುವಂತೆ ನೋಡಲ್ ಅಧಿಕಾರಿಗಳು ಸದರಿ ಅಧಿಕಾರಿಗಳಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಲಿಂಗಧೀರನಹಳ್ಳಿ ಕೆರೆಯಲ್ಲಿರುವ ಎಸ್.ಟಿ.ಪಿ ಪ್ರಾರಂಭದಿಂದ ಇಲ್ಲಿಯವರೆಗೂ ನಿರ್ವಹಣೆಯನ್ನು ಪ್ರಾರಂಭಿಸಿರುವುದಿಲ್ಲ ಎಂದು ವಾರ್ಡ್ ಕಮಿಟಿ ಸದಸ್ಯರುಗಳು ತಿಳಿಸಿದರು. ನಂತರ ನೋಡಲ್ ಅಧಿಕಾರಿಯವರು ಮಾತನಾಡಿ ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.
- ಮುಂದಿನ ಸಭೆಯೊಳಗಾಗಿ ಕೆರೆಗಳ ವಿಭಾಗಕ್ಕೆ ಸಂಬಂಧಿಸಿದ ಅಧಿಕಾರಿಗಳು ನೋಡಲ್ ಅಧಿಕಾರಿಗಳು ಮತ್ತು ವಾರ್ಡ್ ಕಮಿಟಿ ಸದಸ್ಯರೊಂದಿಗೆ ಜಂಟಿಯಾಗಿ ಕೆರೆ ಪರಿಶೀಲಿಸಲು ಸಮಯವನ್ನು ನಿಗದಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

**6) ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯ ಕರಿಹೋಬನಹಳ್ಳಿಯಲ್ಲಿರುವ ವಾರ್ಡ್ ಕಛೇರಿಯಲ್ಲಿ ಪ್ರತಿ ದಿನ ಒಂದು ಅವಧಿಗೆ ಸಹಾಯಕ ಅಭಿಯಂತರರು, ಆರೋಗ್ಯ ಪರಿವೀಕ್ಷಕರು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗುವಂತೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ನೀರುಗಂಟಿಗಳು ಸಾರ್ವಜನಿಕರಿಂದ ಹಣ ಸಂಗ್ರಹಿಸುವ ಬಗ್ಗೆ ದೂರು ಬಂದಿದ್ದು, ಈ ಬಗ್ಗೆ ನೀರುಗಂಟಿಗಳಿಗೆ ಸಹಾಯಕ ಅಭಿಯಂತರರು ಎಚ್ಚರಿಕೆ ನೀಡುವಂತೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಎಂದಿನಂತೆ ಕಂದಾಯ ಸಂಗ್ರಹಿಸುತ್ತಿರುವುದಾಗಿ ಕಂದಾಯ ನಿರೀಕ್ಷಕರು ರವರಿಗೆ ಸಭೆಯಲ್ಲಿ ಸೂಚಿಸಿದರು.
- ವಾರ್ಡ್ ವ್ಯಾಪ್ತಿಗೆ ಸಂಬಂಧಿಸಿದಂತೆ ಕಂದಾಯ ಬಾಕಿ ಉಳಿಸಿಕೊಂಡಿರುವವರ ಪಟ್ಟಿಯನ್ನು ಮುಂದಿನ ಸಭೆಗೆ ತರುವಂತೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

8) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಗಂಗಾ ಇಂಟರ್ ನ್ಯಾಷನಲ್ ಸ್ಕೂಲ್ ನಿಂದ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ವರೆಗೆ ಬಾಕಿ ಉಳಿದಿರುವ ಹೆಚ್.ಎಸ್.ಸಿ ಕಾಮಗಾರಿಯನ್ನು ಮೂರು ದಿನಗಳೊಳಗಾಗಿ ಪೂರ್ಣಗೊಳಿಸುವಂತೆ ಸದಸ್ಯರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ದೊಡ್ಡಬಿದರಕಲ್ಲು ಕಾಲೋನಿಯಲ್ಲಿ ಎಲ್ & ಟಿ ರವರು ಮಣ್ಣನ್ನು ರಸ್ತೆಯಲ್ಲಿಯೆ ಬಿಟ್ಟಿರುವ ಬಗ್ಗೆ ದೂರು ಬಂದಿದ್ದು, ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ನೋಡಲ್ ಅಧಿಕಾರಿಯವರು ಸಭೆಯಲ್ಲಿ ಸೂಚಿಸಿದರು.

9) ವಾರ್ಡ್ ವ್ಯಾಪ್ತಿಯಲ್ಲಿನ ಎಸ್.ಡಬ್ಲ್ಯೂ.ಡಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿರುವ ರಾಜಕಾಲುವೆಗೆ ಸಂಬಂಧಿಸಿದ ಸಂಪೂರ್ಣ ನಕ್ಷೆಯನ್ನು ನೀಡುವಂತೆ ಸಭೆಯಲ್ಲಿ ಸದಸ್ಯರುಗಳು ಸಭೆಯಲ್ಲಿ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ರಾಜಕಾಲುವೆಗಳಿಗೆ ಒಳಚರಂಡಿ ನೀರಿನ ಸಂಪರ್ಕ ನೀಡಿರುವವರ ಮೇಲೆ ನೋಟೀಸ್ ನೀಡಿ ಕ್ರಮಕೈಗೊಳ್ಳುವಂತೆ ಸದಸ್ಯರು ಸಭೆಯಲ್ಲಿ ಸೂಚಿಸಿದರು.

10) ವಾರ್ಡ್ ವ್ಯಾಪ್ತಿಯಲ್ಲಿನ ಬೆಸ್ಕಾಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಬೀದಿದೀಪಗಳನ್ನು ಅಳವಡಿಸಲು ಹೆಚ್ಚುವರಿ ವಿದ್ಯುತ್ ಕಂಬಗಳನ್ನು ಹಾಕುವಂತೆ ಬೇಡಿಕೆ ಕೋರಿದ್ದು, ಈ ಬಗ್ಗೆ ನಮ್ಮ ಕಛೇರಿಗೆ ಪತ್ರ ಬರೆಯುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

11) ವಾರ್ಡ್ ವ್ಯಾಪ್ತಿಯಲ್ಲಿನ ತೋಟಗಾರಿಕೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ಪಾರ್ಕ್ ಗಳಲ್ಲಿ ಜಿಮ್ ಉಪಕರಣಗಳನ್ನು ಅಳವಡಿಸಲು ಪ್ರಸ್ತಾವನೆ ಸಲ್ಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

<u>ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು.</u>

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.40, ದೊಡ್ಡಬಿದರಕಲ್ಲು

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.40, ದೊಡ್ಡಬಿದರಕಲ್ಲು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಪ್ರತಿಯನ್ನು:-</u>

<u>ಅಧಿಕಾರಿಗಳ ಮಾಹಿತಿಗಾಗಿ</u>

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ. ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಮಾನ್ಯ ತಹಶೀಲ್ದಾರ್ ಬೆಂಗಳೂರು ಉತ್ತರ ತಾಲ್ಲೂಕು ರವರ ಮಾಹಿತಿಗಾಗಿ ಕಳುಹಿಸಿದೆ.
5. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ ರವರ ಮಾಹಿತಿಗಾಗಿ ಕಳುಹಿಸಿದೆ.